**2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು**

**ಸಿ.ಸಿ 1795/18** **ಸಿ. ಡಬ್ಲ್ಯೂಃ 15**

**ಪಿ. ಡಬ್ಲುಃ 3**

| | |
|---|---|
| ಸಾಕ್ಷಿದಾರರ ಹೆಸರು ತಂದೆಯ ಹೆಸರು<br>ವಯಸ್ಸು<br>ಕೆಲಸ<br>ವಾಸ | ಶಿವರಾಜು<br>ಮಾದಯ್ಯ<br>44 ವರ್ಷ<br>ಕೆ.ಎಸ್.ಆರ್.ಟಿ.ಸಿ ಚಾಲಕ ಕಂ ನಿರ್ವಾಹಕ<br>ಮಲವಳ್ಳಿ |
| | ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂ<br>01.04.2025 |

ಮುಖ್ಯ ವಿಚಾರಣೆಃ **ಶ್ರೀ. ಎಪಿಪಿ ವಕೀಲರಿಂದಃ**

ನನಗೆ ಚಾಸಾ-14 ರವರ ಪರಿಚಯ ಇರುತ್ತದೆ. ನನಗೆ ಆರೋಪಿಯ ಪರಿಚಯ ಇರುತ್ತದೆ. ಸಾಕ್ಷಿಗೆ ಒಂದು ದಾಖಲಾತಿ ತೋರಿಸಲಾಗಿ ಅದು ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ನಿಪಿ-4 ಕ್ಕೆ ಸುಮಾರು 7 ವರ್ಷಗಳ ಹಿಂದೆ ಪೊಲೀಸರ ಕೋರಿಕೆಯ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ-4 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನಮ್ಮ ಸಮಕ್ಷಮ ಯಾವುದೇ ವಾಹನವನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಈ ಪ್ರಕರಣದ ಬಗ್ಗೆ ನನಗೇನು ಗೊತ್ತಿಲ್ಲ.

(ಸಸಅ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು)

**ಪಾಟೀ ಸವಾಲುಃ ಶ್ರೀ. ಎಪಿಪಿ ಯವರಿಂದ**

ದಿ:20.08.2018 ರಂದು ಪೊಲೀಸರು ನನ್ನನ್ನು ಮತ್ತು ಚಾಸಾ-14 ರವರನ್ನು ಬರಮಾಡಿಕೊಂಡು ಕೇಸಿನ ವಿದ್ಯಾಮಾನ ತಿಳಿಸಿ ಪಂಚರಾಗಲು ಕೋರಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದಕ್ಕೆ ನಾನು ಒಪ್ಪಿದ ಮೇರೆಗೆ ಆರೋಪಿ ಅಪಘಾತ ಪಡಿಸಿದ ಕೆಎ-10-ಎಫ್-209 ಕೆ ಎಸ್ ಆರ್ ಟಿ ಸಿ ಬಸ್ ಅನ್ನು ಬೆಳಗ್ಗೆ 11.00 ಗಂಟೆಯಿಂದ 11.30 ರವರೆಗೆ ನಿಪಿ-4 ರಂತೆ ಮಹಜರ್ ಕ್ರಮ ಜರುಗಿಸಿ ಮುಂದಿನ ಕ್ರಮಕ್ಕಾಗಿ ಅಮಾನತ್ತು ಪಡಿಸಿಕೊಂಡು ನಿಪಿ-4 ಅನ್ನು ಓದಿ ಹೇಳಿ ನನ್ನ ಮತ್ತು ಚಾಸಾ-14 ರವರ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-4 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರೂ ಸಹ ಆರೋಪಿ ನಮ್ಮ ಇಲಾಖ ನೌಕರರಾಗಿರುವುದರಿಂದ ಅವರಿಗೆ ಸಹಾಯಮಾಡಲು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)

ಓ . ಹೇ. ಕೇ. ಸರಿ. ಇದೆ

ಸಹಿ/-

**2 ನೇ ಕಿ.**ಪ್ರ.ದ. ನ್ಯಾ. ದಂ. ನಂಜನಗೂಡು